ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ
ಮಲ್ಲೇಶ್ವರಂ, ಬೆಂಗಳೂರು–560003

KARNATAKA SCHOOL EXAMINATION AND ASSESSMENT BOARD
Malleshwaram, Bengaluru-560003

ಎಸ್.ಎಸ್.ಎಲ್.ಸಿ. ಮಾದರಿ ಪ್ರಶ್ನೆಪತ್ರಿಕೆ 2022–23

ವಿಷಯ : ಪ್ರಥಮ ಭಾಷೆ ಕನ್ನಡ

ಸಮಯ: 3 ಗಂಟೆ 15 ನಿಮಿಷಗಳು **ವಿಷಯ ಸಂಕೇತ: 01K**
ಗರಿಷ್ಠ ಅಂಕಗಳು : 100

CCE-RF
Revised
ಶಾಲಾ ಅಭ್ಯರ್ಥಿಗಳಿಗೆ

ಪರೀಕ್ಷಾರ್ಥಿಗಳಿಗಾಗಿ ಸಾಮಾನ್ಯ ಸೂಚನೆಗಳು :

1. ಈ ಪ್ರಶ್ನೆಪತ್ರಿಕೆಯು ವಸ್ತುನಿಷ್ಠ ಮತ್ತು ವಿಷಯನಿಷ್ಠ ಮಾದರಿಯ ಒಟ್ಟು 45 ಪ್ರಶ್ನೆಗಳನ್ನು ಹೊಂದಿದೆ.
2. ಈ ಪ್ರಶ್ನೆಪತ್ರಿಕೆಯು ಹಿಮ್ಮುಖ ಜಾಕೆಟ್ ಮೂಲಕ ಮೊಹರು (ಸೀಲ್) ಮಾಡಲಾಗಿದೆ. ಪರೀಕ್ಷೆ ಪ್ರಾರಂಭವಾಗುವ ಸಮಯಕ್ಕೆ ನಿಮ್ಮ ಪ್ರಶ್ನೆಪತ್ರಿಕೆಯ ಬಲಬದಿ ಪಾರ್ಶ್ವವನ್ನು ಕತ್ತರಿಸಿ, ಪ್ರಶ್ನೆಪತ್ರಿಕೆಯಲ್ಲಿ ಎಲ್ಲಾ ಪುಟಗಳು ಇವೆಯೇ ಎಂದು ಪರೀಕ್ಷಿಸಿಕೊಳ್ಳಿ.
3. ವಸ್ತುನಿಷ್ಠ ಮತ್ತು ವಿಷಯನಿಷ್ಠ ಮಾದರಿಯ ಪ್ರಶ್ನೆಗಳಿಗೆ ಕೊಟ್ಟಿರುವ ಸೂಚನೆಗಳನ್ನು ಪಾಲಿಸಿ.
4. ಬಲ ಭಾಗದಲ್ಲಿ ಕೊಟ್ಟಿರುವ ಅಂಕಿಗಳು ಪ್ರಶ್ನೆಗಳಿಗಿರುವ ಪೂರ್ಣ ಅಂಕಗಳನ್ನು ತೋರಿಸುತ್ತವೆ.
5. ಪ್ರಶ್ನೆಪತ್ರಿಕೆಯನ್ನು ಓದಿಕೊಳ್ಳಲು 15 ನಿಮಿಷಗಳ ಕಾಲಾವಕಾಶವೂ ಸೇರಿದಂತೆ, ಉತ್ತರಿಸಲು ನಿಗದಿಪಡಿಸಲಾದ ಸಮಯವನ್ನು ಪ್ರಶ್ನೆಪತ್ರಿಕೆಯ ಮೇಲ್ಭಾಗದಲ್ಲಿ ನೀಡಲಾಗಿದೆ.

I ಕೆಳಗಿನ ಪ್ರಶ್ನೆಗಳಿಗೆ ಅಥವಾ ಅಪೂರ್ಣ ಹೇಳಿಕೆಗಳಿಗೆ ನಾಲ್ಕು ಆಯ್ಕೆಗಳನ್ನು ನೀಡಲಾಗಿದೆ. ಅವುಗಳಲ್ಲಿ ಹೆಚ್ಚು ಸೂಕ್ತವಾದ ಉತ್ತರವನ್ನು ಆರಿಸಿ ಕ್ರಮಾಕ್ಷರದೊಂದಿಗೆ ಬರೆಯಿರಿ. 6x1=6

1. 'ಮೈದೋರು' ಪದವು ಈ ಸಂಧಿಗೆ ಸೇರಿದೆ

ಎ) ಆಗಮ ಬಿ) ಆದೇಶ

ಸಿ) ಗುಣ ಡಿ) ಯಣ್

2. ಅನೇಕ ಉಪವಾಕ್ಯಗಳು ಒಂದು ಪ್ರಧಾನ ವಾಕ್ಯಕ್ಕೆ ಅಧೀನವಾಗಿದ್ದಾಗ ಉಪವಾಕ್ಯಗಳು ಮುಗಿದಾಗಲೆಲ್ಲ ಬಳಸುವ ಲೇಖನ ಚಿಹ್ನೆ

ಎ) ಪೂರ್ಣ ವಿರಾಮ ಬಿ) ಅಲ್ಪ ವಿರಾಮ

ಸಿ) ಅರ್ಧವಿರಾಮ ಡಿ) ಉದ್ಧರಣ

3. ಒಂದು ಪೂರ್ಣ ಕ್ರಿಯಾಪದದೊಂದಿಗೆ ಸ್ವತಂತ್ರವಾಗಿರುವ ವಾಕ್ಯ

ಎ) ಸಂಯೋಜಿತ ವಾಕ್ಯ ಬಿ) ಮಿಶ್ರ ವಾಕ್ಯ

ಸಿ) ಸಂಯುಕ್ತ ವಾಕ್ಯ ಡಿ) ಸಾಮಾನ್ಯ ವಾಕ್ಯ

4. ತೃತೀಯಾ ವಿಭಕ್ತಿಯ ಕಾರಕಾರ್ಥ

ಎ) ಕರಣಾರ್ಥ ಬಿ) ಕರ್ಮಾರ್ಥ

ಸಿ) ಸಂಪ್ರದಾನ ಡಿ) ಅಪಾದಾನ

5. ಕ್ರಿಯಾರ್ಥಕಾವ್ಯಯಕ್ಕೆ ಉದಾಹರಣೆಯಿದು

ಎ) ನೀನೇ ಬಿ) ಸಾಕು

ಸಿ) ಬೇಗನೆ ಡಿ) ಆದ್ದರಿಂದ

6. 'ಮಾಡು' ಧಾತುವಿನ ವಿಧ್ಯರ್ಥಕ ಕ್ರಿಯಾರೂಪ

ಎ) ಮಾಡುವನು ಬಿ) ಮಾಡನು

ಸಿ) ಮಾಡಿಯಾನು ಡಿ) ಮಾಡೋಣ

II ಕೆಳಗಿನವುಗಳಲ್ಲಿ ಮೊದಲೆರಡು ಪದಗಳಿರುವ ಸಂಬಂಧದಂತೆ ಮೂರನೆಯ ಪದಕ್ಕೆ ಸರಿಹೊಂದುವ ಸಂಬಂಧೀ ಪದವನ್ನು ಬರೆಯಿರಿ. 4x1=4

7. ತುತ್ತತುದಿ : ದ್ವಿರುಕ್ತಿ : : ಪುಸ್ತಕಗಿಸ್ತಕ : _____

8. ಬೆಟ್ಟದಾವರೆ : ತತ್ಪುರುಷ ಸಮಾಸ : : ಕಣ್ದೆರೆ : _____

9. ವೈಶಾಖ : ಬೇಸಗೆ : : ಪಾದುಕಾ : _____

10. ಬಳೆಗಾರ : ತದ್ಧಿತಾಂತನಾಮ : : ಜಾಣತನ : _____

III ಕೆಳಗಿನ ಪ್ರತಿಯೊಂದು ಪ್ರಶ್ನೆಗಳಿಗೆ ಒಂದೊಂದು ವಾಕ್ಯದಲ್ಲಿ ಉತ್ತರ ಬರೆಯಿರಿ. **7x1=7**

11. ಗುರುಪೂರ್ಣಿಮಾ ದಿನದಂದು ಲೇಖಕರು ಯಾವುದನ್ನು ಪೂಜಿಸುತ್ತಾರೆ?

12. ದೇವನೂರರಿಗೆ ಮನೆ ಮಂಚಮ್ಮನ ಕತೆ ಹೇಳಿದ ಕವಿ ಯಾರು?

13. ಅನ್ನದ ವಿಷಯದಲ್ಲಿ ವೇದ ಏನು ಹೇಳಿದೆ?

14. ಧರ್ಮಬುದ್ಧಿಯು ತನ್ನ ಬೆಳಗಿನ ಹೊತ್ತನ್ನು ಹೇಗೆ ಕಳೆದನು?

15. ಕಾಡು ಮೇಡುಗಳ ಸ್ಥಿತಿ ಹೇಗಿವೆ?

16. ಫಲವನ್ನೇ ಮೆರೆಯುವುದಾಗಿ ನಿರ್ಧರಿಸಿದವರು ಯಾರು?

17. ಪುಟ್ಟ ಪೋರಿಯ ಅಮ್ಮ ಎಲ್ಲಿ ಮಲಗಿದ್ದಾಳೆ?

IV ಕೆಳಗಿನ ಪ್ರಶ್ನೆಗಳಿಗೆ ಮೂರು ಅಥವಾ ನಾಲ್ಕು ವಾಕ್ಯಗಳಲ್ಲಿ ಉತ್ತರ ಬರೆಯಿರಿ. **10x2=20**

18. ಆತಿಥ್ಯ ಸ್ವೀಕರಿಸಿದ ರಾಮ ಲಕ್ಷ್ಮಣರು ಶಬರಿಗೆ ಏನು ಹೇಳಿದರು?

19. ಮೊಗ್ಗನ್ನು ಆದರ್ಶವಾಗಿ ಸ್ವೀಕರಿಸಲು ಇರುವ ತೊಡಕುಗಳಾವುವು?

20. ಮನುಷ್ಯನು ತನ್ನ ಒಳಿತನ್ನು ಹೇಗೆ ಸಾಧಿಸಬಹುದು?

21. ಧರ್ಮಬುದ್ಧಿಗೆ ದುಷ್ಟಬುದ್ಧಿ ನೀಡಿದ ಸಲಹೆಗಳಾವುವು?

22. ನಾಳಿನ ಕನಸನ್ನು ಬಿತ್ತಬೇಕಾದರೆ ನಾವು ಹೇಗೆ ಬದುಕಬೇಕು ಎಂದು ಕವಿ ಜಿ.ಎಸ್. ಶಿವರುದ್ರಪ್ಪನವರು ಹೇಳಿದ್ದಾರೆ?

23. ಪರಶುರಾಮನು ದ್ರೋಣರಿಗೆ ಮಣ್ಣಿನ ಪಾತ್ರೆಯಲ್ಲಿ ಅರ್ಘ್ಯವನ್ನು ಕೊಡಲು ಕಾರಣವೇನು?

24. 'ಅನ್ ಟು ದಿಸ್ ಲಾಸ್ಟ್' ಕೃತಿ ಗಾಂಧೀಜಿಯವರ ಮೇಲೆ ಯಾವ ಪರಿಣಾಮ ಬೀರಿತು?

25. 'ತ್ಯಾಗದ ಪ್ರತೀಕ ಆ ಮಣ್ಣು' ಎಂದು ಭಗತ್‌ಸಿಂಗ್ ತನ್ನ ಸಹೋದರಿಗೆ ತಿಳಿಸಿದ ಸಂದರ್ಭವನ್ನು ತಿಳಿಸಿ.

26. ಮಲೆನಾಡಿನಲ್ಲಿ ದೀಪದ ಬತ್ತಿಯ ಸಮಸ್ಯೆಯನ್ನು ಹೇಗೆ ಪರಿಹರಿಸಿಕೊಳ್ಳಲಾಯಿತು?

27. ಪೈಗಳ ತಮ್ಮನ ನೂಲು ಮದುವೆಯ ದಿನ ಅಂಗಳದಲ್ಲಿ ಏನೇನು ಸಿದ್ಧತೆಗಳಾಗುತ್ತಿದ್ದವು?

V ಕೆಳಗಿನ ಕವಿಗಳ/ಸಾಹಿತಿಗಳ ಜನ್ಮಸ್ಥಳ, ಕಾಲ, ಕೃತಿ ಮತ್ತು ಬಿರುದು/ಪ್ರಶಸ್ತಿಗಳನ್ನು ಕುರಿತು ವಾಕ್ಯರೂಪದಲ್ಲಿ ಬರೆಯಿರಿ. 2x3=6

28. ಡಿ.ಎಸ್. ಜಯಪ್ಪಗೌಡ

29. ಪಂಪ

VI ಕೆಳಗಿನ ಪದ್ಯ ಭಾಗಕ್ಕೆ ಪ್ರಸ್ತಾರ ಹಾಕಿ ಗಣ ವಿಭಾಗ ಮಾಡಿ ಛಂದಸ್ಸಿನ ಹೆಸರನ್ನು ಬರೆಯಿರಿ. 1x3=3

30. ಮತಿಗೆಟ್ಟು 'ತಸ್ಕರಸ್ಯಾ
ನೃತಂ ಬಲಂ' ಎನಿಪ ವಾಕ್ಯವಂ ನೆನೆಯುತ್ತುಂ

VII ಕೆಳಗಿನ ವಾಕ್ಯದಲ್ಲಿರುವ ಅಲಂಕಾರವನ್ನು ಹೆಸರಿಸಿ, ಲಕ್ಷಣ ಬರೆದು, ಸಮನ್ವಯಗೊಳಿಸಿ. 1x3=3

31. "ಗೀಜುಗನ ಗೂಡುಗಳು ತೊಟ್ಟಿಲುಗಳಂತೆ ತೂಗಾಡುತ್ತಿದ್ದವು"

VIII ಕೆಳಗಿನ ಗಾದೆಗಳಲ್ಲಿ ಯಾವುದಾದರೂ ಒಂದನ್ನು ಗಾದೆಯ ಮಹತ್ತ್ವದೊಂದಿಗೆ ವಿಸ್ತರಿಸಿ ಬರೆಯಿರಿ. 1x3=3

32. ಶಕ್ತಿಗಿಂತ ಯುಕ್ತಿ ಮೇಲು

ಅಥವಾ

ಕಟ್ಟುವುದು ಕಠಿಣ; ಕೆಡಹುವುದು ಸುಲಭ.

IX ಕೆಳಗಿನ ವಾಕ್ಯ ಅಥವಾ ಹೇಳಿಕೆಗಳಿಗೆ ಸಂದರ್ಭ ಮತ್ತು ಸ್ವಾರಸ್ಯಗಳನ್ನು ಬರೆಯಿರಿ. 6x3=18

33. "ನನ್ನೆದೆಯ ಬಿಡದಲಾ ಈ ಜಗವ ಸುಡದಲಾ"

34. "ಗುರೂಪದೇಶ ಎಂದರೆ ತಲೆ ನೆರೆಯದೆ ಬರುವ ಮುಪ್ಪು".

35. "ಅವರಿಗೆ ಅವರವರ ಪ್ರಜ್ಞೆಯೇ ದೇವರಾಗಿತ್ತು"

36. "ದಂಡ ಬಂದಿತೊ ತಯಾರಾಗಿ ಜಲದ ಮಾಡಿ ಹಲಗಲಿಗಿ"

37. "ಹಸುರತ್ತಲ್ ಹಸುರಿತ್ತಲ್ ಹಸುರೆತ್ತಲ್"

38. "ನೆಲಕಿಜೆವೆನೆಂದು ಬಗೆದಿರೆ ಚಲಕಿಜೆವೆಂ"

X ಕೆಳಗಿನ ಪದ್ಯಭಾಗವನ್ನು ಪೂರ್ಣಗೊಳಿಸಿ ಬರೆಯಿರಿ. 1x4=4

39. ನೀಲಮೇಘಮಂಡಲ.....

.....

.....

.....

ಹಕ್ಕಿ ಹಾರುತಿದೆ ನೋಡಿದಿರಾ ?

ಅಥವಾ

ಯುಗ–ಯುಗಗಳ .....

.....

.....

.....

ಹಕ್ಕಿ ಹಾರುತಿದೆ ನೋಡಿದಿರಾ?

XI ಕೆಳಗಿನ ಪದ್ಯಭಾಗವನ್ನು ಓದಿ ಅರ್ಥಮಾಡಿಕೊಂಡು, ಅಡಕವಾಗಿರುವ ಮೌಲ್ಯವನ್ನಾಧರಿಸಿ ಸಾರಾಂಶ ಬರೆಯಿರಿ. 1x4=4

40. ಬಲ್ಗಯ್ಯ ನೃಪರಂಜಿ ತಡೆಯದೆ ರಘೂದ್ವಹನ ।
ಸೊಲ್ಗೇಳಿ ನಮಿಸಲಿಳೆಯೊಳ್ ಚರಿಸುತದ್ವರದ ।
ನಲ್ಗುದುರೆ ಬಂದು ವಾಲ್ಮೀಕಿಯ ನಿಜಾಶ್ರಮದ ವಿನಿಯೋಗದುಪವನದೊಳು ॥
ಪುಲ್ಗಳ ಪಸುರ್ಗೆಳಸಿ ಪೊಕ್ಕೊಡಾ ತೋಟಗಾ ।
ವಲ್ಗೆ ತನ್ನೊಡನಾಡಿಗಳ ಕೂಡಿ ಲೀಲೆ ಮಿಗೆ ।
ಬಿಲ್ಗೊಂಡು ನಡೆತಂದವಂ ಕಂಡನರ್ಚಿತ ಸುವಾಜಿಯಂ ವೀರಲವನು ॥

XII ಕೆಳಗಿನ ಪ್ರಶ್ನೆಗಳಿಗೆ ಎಂಟು ಅಥವಾ ಹತ್ತು ವಾಕ್ಯಗಳಲ್ಲಿ ಉತ್ತರ ಬರೆಯಿರಿ. 2x4=8

41. 'ವೆಸ್ಟ್ ಮಿನ್‌ಸ್ಟರ್ ಅಬೆ' ಪ್ರಾರ್ಥನಾ ಮಂದಿರದಲ್ಲಿನ 'ಪೊಯೆಟ್ಸ್ ಕಾರ್ನರ್' ಹಾಗೂ 'ರಾಯಲ್ ಚಾಪೆಲ್'ನ ವಿಶೇಷತೆಯನ್ನು ಕುರಿತು ಬರೆಯಿರಿ.

ಅಥವಾ

ವೂಲವರ್ಥ ಸ್ಟೇಷನರಿ ಅಂಗಡಿ ಹಾಗೂ ಲಂಡನ್ನಿನಲ್ಲಿ ಹೆಣ್ಣನ್ನು ಸತ್ಕರಿಸುವ ರೀತಿಯನ್ನು ಗೋಕಾಕರು ಹೇಗೆ ವಿವರಿಸಿದ್ದಾರೆ?

42. ಶ್ರೀಕೃಷ್ಣನು ಕರ್ಣನಿಗೆ ಒಡ್ಡಿದ ಆಮಿಷಗಳನ್ನು ನಿಮ್ಮ ಮಾತುಗಳಲ್ಲಿ ಬರೆಯಿರಿ.

ಅಥವಾ

ಪಾಂಡವರು ಸೋದರರೆಂದು ತಿಳಿದಾಗ ಕರ್ಣನ ಮನದಲ್ಲಿ ಮೂಡಿದ ಭಾವನೆಗಳನ್ನು ವಿವರಿಸಿ.

XIII ಕೆಳಗಿನ ಗದ್ಯಭಾಗವನ್ನು ಮನಸ್ಸಿನಲ್ಲಿ ಓದಿಕೊಂಡು, ಕೊಟ್ಟಿರುವ ಪ್ರಶ್ನೆಗಳಿಗೆ ಉತ್ತರ ಬರೆಯಿರಿ. 1x4=4(2+2)

43. ಹಕ್ಕಿ ಗೂಡಿನಲ್ಲಿ ನೋವಿದೆ, ನಲಿವಿದೆ, ಆಕ್ರಂದನವಿದೆ, ಸಂತಸದ ದನಿಯಿದೆ. ಕಾವು, ಗುಟುಕು ಪಡೆದು ಜೀವ ಕಣ್ತೆರೆವ ಸೃಷ್ಟಿಯ ಅಚ್ಚರಿಯಿದೆ. ಶತ್ರುಗಳ ಬೇಟೆಗೆ ಅಥವಾ ನೈಸರ್ಗಿಕ ವಿಕೋಪಕ್ಕೆ ತುತ್ತಾಗಿರುವ ದಾರುಣವಿದೆ. ಈ ಅವಘಡಗಳನ್ನು ಎದುರಿಸಿ ಬದುಕುವ ಸಾಹಸಗಾಥೆ ಅಲ್ಲಿ ಕಾಣುತ್ತದೆ. ಕೆಲವು ಕೀಟ, ಉರಗ ಸಂತತಿ ಮತ್ತು ಹಲವು ಸಸ್ತನಿಗಳೂ ಗೂಡು ಕಟ್ಟುತ್ತವೆ. ಆದರೆ ಹಕ್ಕಿಗಳಷ್ಟು ಕೌಶಲ್ಯದಿಂದ ಗೂಡು ಕಟ್ಟುವ ಚಾಕಚಕ್ಯತೆ ಬೇರಾವುದಕ್ಕೂ ಬಾರದು.

ಹಕ್ಕಿಗಳು ಗೂಡನ್ನು ನಿರ್ಮಿಸುವುದು ಮುಖ್ಯವಾಗಿ ರಕ್ಷಣೆಗಾಗಿ. ಶೀತಗಾಳಿ, ಬಿರುಗಾಳಿ, ಮಳೆ ಪ್ರವಾಹಗಳ ವಿರುದ್ಧ ಬದುಕಲು ಅವುಗಳಿಗೆ ಗೂಡು ಬೇಕು. ಮರುಭೂಮಿಯಂಥ ಪ್ರದೇಶಗಳಲ್ಲಿ ಮರಳಿನ ಹೊಡೆತ, ಪ್ರಖರ ಸೂರ್ಯರಶ್ಮಿ ಮುಂತಾದ ಹವಾಮಾನ ವೈಪರೀತ್ಯಗಳನ್ನು ಪ್ರತಿರೋಧಿಸಲು ಗೂಡು ಬೇಕು. ಮೊಟ್ಟೆ, ಮರಿಗಳನ್ನು ರಕ್ಷಿಸಿಕೊಳ್ಳಲು, ತಮ್ಮನ್ನು ಬೇಟೆಯಾಡುವ ಪ್ರಾಣಿಗಳಿಂದ ತಪ್ಪಿಸಿಕೊಳ್ಳಲು ಎತ್ತರದ ಮರದ ತುದಿ, ಕಣಿವೆ, ಬಿಲ, ದ್ವೀಪ ಅಥವಾ ನೀರಿನ ಮೇಲೆ ಅವು ಗೂಡು ಕಟ್ಟಬೇಕು.

ಮೊಟ್ಟೆ ಇಡುವ ಬೆನ್ನು ಮೂಳೆ ಪ್ರಾಣಿಗಳಲ್ಲಿ ಹಕ್ಕಿಗಳೇ ಅತಿಹೆಚ್ಚು ಉಷ್ಣದೇಹಿಗಳು. ಅವುಗಳ ದೇಹದ ಉಷ್ಣತೆಯನ್ನು ಕಾಪಾಡಲು, ಮೊಟ್ಟೆಗಳಿಗೆ ಹಾಗೂ ತುಪ್ಪಳವಿಲ್ಲದ ಮರಿಗಳಿಗೆ ಕಾವು ಕೊಡಲು ಬೆಚ್ಚನೆಯ ಗೂಡು ಬೇಕು. ತಾಯಿ ಗರ್ಭಾಶಯದಲ್ಲಿರುವ ಭ್ರೂಣದಷ್ಟೇ ಗೂಡಿನಲ್ಲಿರುವ ಮೊಟ್ಟೆ ಮರಿಗಳು ಸುರಕ್ಷಿತವಾಗಿರುತ್ತವೆ. ಅದರಿಂದಲೇ 'ಹಕ್ಕಿಗಳಿಗೆ ಗೂಡು ಮಕ್ಕಳಿಗೆ ತಾಯಿ' ಎಂಬ ಗಾದೆ ರೂಢಿಯಲ್ಲಿದೆ.

ಗೂಡು ಕಟ್ಟುವಷ್ಟೇ ಅದನ್ನು ಕಟ್ಟುವ ಸ್ಥಳದ ಆಯ್ಕೆ ಹಕ್ಕಿಯ ಬದುಕಿನಲ್ಲಿ ಮಹತ್ವದ ಪಾತ್ರವಹಿಸುತ್ತದೆ. ನಭದಲ್ಲಿ ಹಾರಿ, ಪರ್ವತಗಳನ್ನು ಏರಿ, ಸಾಗರ, ದ್ವೀಪಗಳನ್ನು ದಾಟುವ ಹಕ್ಕಿಗಳು ತಮಗಿರುವ ಅಪೂರ್ವ ಹಾರಾಟ ಶಕ್ತಿಯಿಂದ ಎಲ್ಲೆಂದರಲ್ಲಿ ಗೂಡು ನಿರ್ಮಿಸಬಹುದಾದ ಅನಂತ ಅವಕಾಶಗಳನ್ನು ಪಡೆದಿವೆ. ಸಾಗರದ ದ್ವೀಪ, ಗಿರಿಶಿಖರದ ನೆತ್ತಿ, ಮನುಷ್ಯ ನುಸುಳಲಾರದ ನಿಬಿಡ ವನಶ್ರೇಣಿ, ಸೂರ್ಯನ ಬೆಳಕಿಗೂ ಪ್ರವೇಶ ನಿರಾಕರಿಸುವ ಕಗ್ಗತ್ತಲ ಕಣಿವೆ, ರಕ್ತ ಹೆಪ್ಪುಗಟ್ಟಿಸುವ ಶೀತಲ ಧ್ರುವ ಪ್ರದೇಶ. ಹೀಗೆ ಎಲ್ಲೆಲ್ಲೂ ಅವು ಗೂಡು ಕಟ್ಟಬಲ್ಲವು. ಈ ವಿಚಾರದಲ್ಲಿ ಮಾತ್ರ ಹಕ್ಕಿಯನ್ನು ಬೇರೆ ಯಾವ ಸಂಕುಲವೂ ಮೀರಿಸಲಾರದು.

ಪ್ರಶ್ನೆಗಳು :

ಅ) ಹಕ್ಕಿಗಳು ಗೂಡನ್ನು ಎಲ್ಲೆಲ್ಲಿ ಕಟ್ಟಬಲ್ಲವು?

ಆ) ಹಕ್ಕಿಗಳು ಗೂಡನ್ನು ನಿರ್ಮಿಸುವ ಉದ್ದೇಶವೇನು?

XIV ಕೆಳಗಿನ ಯಾವುದಾದರೂ ಒಂದಕ್ಕೆ ಕೊಟ್ಟಿರುವ ಮಾಹಿತಿಯನ್ನು ಆಧರಿಸಿ ಪತ್ರ ಬರೆಯಿರಿ. 1x5=5

44. ನಿಮ್ಮನ್ನು ತೀರ್ಥಹಳ್ಳಿಯ ನಿವಾಸಿ 'ಶೃತಿ' ಎಂದು ಭಾವಿಸಿಕೊಂಡು, ನಿಮ್ಮ ಊರಿಗೆ 'ಶುದ್ಧ ಕುಡಿಯುವ ನೀರಿನ ಘಟಕ'ವನ್ನು ಒದಗಿಸಿಕೊಡುವಂತೆ ಕೋರಿ, ಪುರಸಭೆ ಅಧ್ಯಕ್ಷರಿಗೆ ಮನವಿ ಪತ್ರವನ್ನು ಬರೆಯಿರಿ.

ಅಥವಾ

ನಿಮ್ಮನ್ನು ಚಿಕ್ಕಮಗಳೂರಿನ ಸರ್ಕಾರಿ ಪ್ರೌಢಶಾಲೆಯ 'ಸಂದೇಶ್' ಎಂದು ಭಾವಿಸಿಕೊಂಡು, ನೀವು ಕೈಗೊಂಡ ಶೈಕ್ಷಣಿಕ ಪ್ರವಾಸವನ್ನು ವಿವರಿಸಿ, ಬೆಂಗಳೂರಿನ ಜಯನಗರದಲ್ಲಿ ವಾಸವಾಗಿರುವ 'ನಿರಂಜನ' ಎಂಬ ಹೆಸರಿನ ಗೆಳೆಯನಿಗೆ ಪತ್ರ ಬರೆಯಿರಿ.

XV ಕೆಳಗಿನ ಯಾವುದಾದರೂ ಒಂದು ವಿಷಯದಲ್ಲಿ ಹದಿನೈದು ವಾಕ್ಯಗಳಿಗೆ ಕಡಿಮೆ ಇಲ್ಲದಂತೆ ಪ್ರಬಂಧ ಬರೆಯಿರಿ. 1x5=5

45. ಶಾಲಾ ಸಂಸತ್ತಿನ ಕಾರ್ಯಚಟುವಟಿಕೆಗಳು.

ಅಥವಾ

ಮಹಿಳಾ ಸಬಲೀಕರಣ.

-●-●-●-

ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ

ಮಲ್ಲೇಶ್ವರಂ, ಬೆಂಗಳೂರು-560003

KARNATAKA SCHOOL EXAMINATION AND ASSESSMENT BOARD

Malleshwaram, Bengaluru-560003

ಎಸ್.ಎಸ್.ಎಲ್.ಸಿ. ಮಾದರಿ ಪ್ರಶ್ನೆಪತ್ರಿಕೆ 2022-23

ವಿಷಯ : ದ್ವಿತೀಯ ಭಾಷೆ — ಕನ್ನಡ

ಸಮಯ: 3 ಗಂಟೆ

ಗರಿಷ್ಠ ಅಂಕಗಳು : 80

ವಿಷಯ ಸಂಕೇತ: **33-K**

CCE-RF

ಶಾಲಾ ಅಭ್ಯರ್ಥಿಗಳಿಗೆ

ಪರೀಕ್ಷಾರ್ಥಿಗಳಿಗಾಗಿ ಸಾಮಾನ್ಯ ಸೂಚನೆಗಳು :

1. ಈ ಪ್ರಶ್ನೆಪತ್ರಿಕೆಯು ವಸ್ತುನಿಷ್ಠ ಮತ್ತು ವಿಷಯನಿಷ್ಠ ಮಾದರಿಯ ಒಟ್ಟು 38 ಪ್ರಶ್ನೆಗಳನ್ನು ಹೊಂದಿದೆ.
2. ಈ ಪ್ರಶ್ನೆಪತ್ರಿಕೆಯು ಹಿಮ್ಮುಖ ಜಾಕೆಟ್ ಮೂಲಕ ಮೊಹರು (ಸೀಲ್) ಮಾಡಲಾಗಿದೆ. ಪರೀಕ್ಷೆ ಪ್ರಾರಂಭವಾಗುವ ಸಮಯಕ್ಕೆ ನಿಮ್ಮ ಪ್ರಶ್ನೆಪತ್ರಿಕೆಯ ಬಲಬದಿ ಪಾರ್ಶ್ವವನ್ನು ಕತ್ತರಿಸಿ, ಪ್ರಶ್ನೆಪತ್ರಿಕೆಯಲ್ಲಿ ಎಲ್ಲಾ ಪುಟಗಳು ಇವೆಯೇ ಎಂದು ಪರೀಕ್ಷಿಸಿಕೊಳ್ಳಿ.
3. ವಸ್ತುನಿಷ್ಠ ಮತ್ತು ವಿಷಯನಿಷ್ಠ ಮಾದರಿಯ ಪ್ರಶ್ನೆಗಳಿಗೆ ಕೊಟ್ಟಿರುವ ಸೂಚನೆಗಳನ್ನು ಪಾಲಿಸಿ.
4. ಬಲ ಭಾಗದಲ್ಲಿ ಕೊಟ್ಟಿರುವ ಅಂಕಿಗಳು ಪ್ರಶ್ನೆಗಳಿಗಿರುವ ಪೂರ್ಣ ಅಂಕಗಳನ್ನು ತೋರಿಸುತ್ತವೆ.
5. ಪ್ರಶ್ನೆಪತ್ರಿಕೆಯನ್ನು ಓದಿಕೊಳ್ಳಲು 15 ನಿಮಿಷಗಳ ಕಾಲಾವಕಾಶವೂ ಸೇರಿದಂತೆ, ಉತ್ತರಿಸಲು ನಿಗದಿಪಡಿಸಲಾದ ಸಮಯವನ್ನು ಪ್ರಶ್ನೆಪತ್ರಿಕೆಯ ಮೇಲ್ಭಾಗದಲ್ಲಿ ನೀಡಲಾಗಿದೆ.

I. ಕೆಳಗಿನ ಪ್ರಶ್ನೆಗಳಿಗೆ ಅಥವಾ ಅಪೂರ್ಣ ಹೇಳಿಕೆಗಳಿಗೆ ನಾಲ್ಕು ಆಯ್ಕೆಗಳನ್ನು ನೀಡಲಾಗಿದೆ. ಅವುಗಳಲ್ಲಿ ಸೂಕ್ತವಾದ ಉತ್ತರವನ್ನು ಆರಿಸಿ, ಅದರ ಕ್ರಮಾಕ್ಷರದೊಂದಿಗೆ ಬರೆಯಿರಿ : 4 × 1 = 4

1. ದ್ವಿತೀಯಾ ವಿಭಕ್ತಿಗೆ ಉದಾಹರಣೆಯಾಗಿರುವ ಪದ

(ಎ) ಬೇಡನು

(ಬಿ) ಬಾಣವನ್ನು

(ಸಿ) ಕಾಶಿಯಲ್ಲಿ

(ಡಿ) ಇಂದ್ರನಿಗೆ

2. ಅನ್ವರ್ಥನಾಮ ಪದವಿದು

(ಎ) ಹೆಂಗಸು

(ಬಿ) ಪುಟ್ಟಯ್ಯ

(ಸಿ) ವೈದ್ಯ

(ಡಿ) ಅವನು

3. ಬೆಟ್ಟದಾವರೆ — ಈ ಪದವು

(ಎ) ಗುಣ ಸಂಧಿ

(ಬಿ) ಲೋಪ ಸಂಧಿ

(ಸಿ) ಆಗಮ ಸಂಧಿ

(ಡಿ) ಆದೇಶ ಸಂಧಿ

4. ಬನ್ನಿಬನ್ನಿ — ಪದವು ಈ ವ್ಯಾಕರಣಾಂಶಕ್ಕೆ ಸಂಬಂಧಿಸಿದೆ

(ಎ) ದ್ವಿರುಕ್ತಿ

(ಬಿ) ಜೋಡುನುಡಿ

(ಸಿ) ಅನುಕರಣಾವ್ಯಯ

(ಡಿ) ನುಡಿಗಟ್ಟು

II. ಕೆಳಗಿನ ಪ್ರತಿಯೊಂದು ಪ್ರಶ್ನೆಗಳಿಗೆ ಒಂದೊಂದು ವಾಕ್ಯದಲ್ಲಿ ಉತ್ತರ ಬರೆಯಿರಿ : $12 \times 1 = 12$

5. ವಿಷದ ಬಾಣವು ಮರಕ್ಕೆ ತಗುಲಿದ್ದರಿಂದಾದ ಪರಿಣಾಮವೇನು ?

6. ಪಂಡಿತಾರಾಧ್ಯ ಶಿವಾಚಾರ್ಯರು ಹೇಳುವಂತೆ ಅಸಿ-ಮಸಿ ಎಂದರೇನು ?

7. ತಾಯಿ ಸಿದ್ಧಮ್ಮ ಪಂಚಾಕ್ಷರಿ ಗವಾಯಿಗಳಲ್ಲಿ ಏನೆಂದು ಬೇಡಿಕೊಂಡಳು ?

8. ಹಕ್ಕಿಗೂಡಿನಲ್ಲಿ ಯಾವುದರ ಸಮನ್ವಯತೆ ಇದೆ ?

9. ಗುರುಗಳು ಹೇಳಿದಂತೆ ಜೀವನದ ತೊಂದರೆಗಳಿಗೆ ನಿಜವಾದ ಕಾರಣ ಯಾವುದು ?

10. ಲಂಡನ್ ವಿಶ್ವವಿದ್ಯಾನಿಲಯದ ಮುಂದೆ ಗಾಂಧೀಜಿಯವರ ಪ್ರತಿಮೆಯನ್ನು ಏಕೆ ಸ್ಥಾಪಿಸಲಾಗಿದೆ ?

11. ಏಣಿ ಕವಿತೆಯಲ್ಲಿ ಕವಯತ್ರಿ ತ್ರಿಶಂಕುಗಳು ಎಂದು ಯಾರನ್ನು ಕರೆದಿದ್ದಾರೆ ?

12. ಎಂ. ಗೋಪಾಲಕೃಷ್ಣ ಅಡಿಗರಪ್ರಕಾರ ಪೌರುಷದ ಬಾಳ್ವೆ ಯಾವುದು ?

13. ಜನಪದರು ತುಂಬಿದ ಕುಣಿಗಲ್ ಕೆರೆಯನ್ನು ಯಾವುದಕ್ಕೆ ಹೋಲಿಸಿದ್ದಾರೆ ?

14. ಕುಣಿಗಲ್ ಕೆರೆಯ ಅಂದವನ್ನು ನೋಡಲು ಯಾರು ಬಂದರೆಂದು ಉತ್ಪ್ರೇಕ್ಷಿಸಲಾಗಿದೆ ?

15. ಅಕ್ಕಮಹಾದೇವಿಯವರು ತಮ್ಮ ಬದುಕು ಯಾವಾಗ ಫಲದಾಯಕ ಆಗುತ್ತದೆಂದು ಹೇಳುತ್ತಾರೆ ?

16. ಉತ್ತರನು ಸುರರ ಸತಿಯರ ಸ್ಥಾನವನ್ನು ಯಾರು ತುಂಬುತ್ತಾರೆ ಎಂದು ಹೇಳುತ್ತಾನೆ ?

III. ಕೆಳಗಿನ ಪ್ರಶ್ನೆಗಳಿಗೆ ಮೂರು ಅಥವಾ ನಾಲ್ಕು ವಾಕ್ಯಗಳಲ್ಲಿ ಉತ್ತರ ಬರೆಯಿರಿ : 8 × 2 = 16

17. ಹಕ್ಕಿಗಳು ಗೂಡನ್ನು ನಿರ್ಮಿಸುವುದರ ಉದ್ದೇಶವನ್ನು ವಿವರಿಸಿ.

18. ಹೆಡ್ ಮಾಸ್ತರರು ತಂದಿಟ್ಟ ಟ್ರೇನಲ್ಲಿ ಯಾವ ಯಾವ ತರಹದ ಕಪ್ಪುಗಳಿದ್ದವು ?

19. ಲಂಡನ್‌ನಲ್ಲಿ ಸಂಭವಿಸಿದ ದುರಂತಗಳ ಬಗ್ಗೆ ಗೈಡ್ ತಿಳಿಸಿದ ವಿಚಾರಗಳೇನು ?

20. ಮಲಗಿದ್ದ ಗೋಪಾಲನನ್ನು ತಾಯಿ ಯಾವ ಮಾತುಗಳಿಂದ ಏಳಿಸಿದಳು ?

21. ಏಣಿ ತಾನು ಎಂಥವರಿಗೆ ಯಾವ ರೀತಿ ಸ್ಪಂದಿಸುತ್ತೇನೆ ಎಂದು ಹೇಳುತ್ತದೆ ?

22. ಸೊನ್ನಲಿಗೆ ಸಿದ್ಧರಾಮರು ತಮ್ಮ ವಚನದಲ್ಲಿ ನಡೆ-ನುಡಿ ಒಂದಾಗಿರಬೇಕು ಎಂಬುದನ್ನು ಹೇಗೆ ತಿಳಿಸಿದ್ದಾರೆ ?

CCERF

23. ಭೀಮನಾಯಕನು ವೈದ್ಯರಿಗೆ ಸಲ್ಲಿಸಿದ ಕೃತಜ್ಞತೆಯನ್ನು ವಿವರಿಸಿ.

24. ಮನುಕುಲದ ಭವ್ಯ ಬದುಕು ಯಾವ ರೀತಿ ಅರಳಬೇಕಿದೆ ?

IV. ಕೆಳಗಿನ ಕವಿ / ಸಾಹಿತಿಯ ಜನ್ಮಸ್ಥಳ, ಕಾಲ, ಕೃತಿ ಮತ್ತು ಬಿರುದು / ಪ್ರಶಸ್ತಿಗಳನ್ನು ಕುರಿತು ವಾಕ್ಯರೂಪದಲ್ಲಿ ಬರೆಯಿರಿ : **1 × 3 = 3**

25. ಅ.ರಾ. ಮಿತ್ರ

V. ಕೆಳಗಿನ ಪದ್ಯದ ಸಾರಾಂಶವನ್ನು ವಾಕ್ಯರೂಪದಲ್ಲಿ ಬರೆಯಿರಿ : **1 × 3 = 3**

26. ತಟ್ಟೆಯೊಳು ಕರ್ಪೂರ ಮೌನದಲಿ ಕರಗುವೊಲು

ದೀಪದೆದುರಿಗೆ ತಿಮಿರ ಸರಿಯುವಂತೆ

ಶಾಂತಿಯಲಿ ಬದುಕಿ ನೀ ಕರ್ತವ್ಯವನು ಮುಗಿಸು

ಕೂಗಾಡಿ, ಹಾರಾಡಿ ಫಲವದೇನು ?

VI. ಕೆಳಗಿನ ವಾಕ್ಯದಲ್ಲಿರುವ ಅಲಂಕಾರವನ್ನು ಹೆಸರಿಸಿ, ಲಕ್ಷಣ ಬರೆದು, ಸಮನ್ವಯಗೊಳಿಸಿ : **1 × 3 = 3**

27. ಸೀತೆಯ ಕಣ್ಣುಗಳು ಕಮಲದಂತೆ ಅರಳಿದವು.

VII. ಕೆಳಗೆ ಕೊಟ್ಟಿರುವ ಗಾದೆಮಾತುಗಳಲ್ಲಿ ಯಾವುದಾದರೂ ಒಂದನ್ನು ಆರಿಸಿಕೊಂಡು, ವಿಸ್ತರಿಸಿ ಬರೆಯಿರಿ : $1 \times 3 = 3$

28. "ಕೈಕೆಸರಾದರೆ ಬಾಯಿ ಮೊಸರು."

ಅಥವಾ

"ಅತಿಯಾಸೆ ಗತಿಗೇಡು."

VIII. ಕೆಳಗಿನ ವಾಕ್ಯ ಅಥವಾ ಹೇಳಿಕೆಗಳಿಗೆ ಸಂದರ್ಭ ಮತ್ತು ಸ್ವಾರಸ್ಯಗಳನ್ನು ಬರೆಯಿರಿ : $5 \times 3 = 15$

29. "ವ್ಯವಸಾಯ ಇಲ್ಲದಿದ್ದರೆ ದೇಶದ ಆಟವೇ ನಡೆಯದು."

30. "ನಿನ್ನಂಥ ಶ್ರೇಷ್ಠ ಪುತ್ರರತ್ನವೊಂದನ್ನು ಹೆತ್ತಭಾಗ್ಯ ನನ್ನದಾಗಲಿ."

31. "ಆ ಗೋಪಾಲ ಕೊಡಬೇಕು, ನಾವು ಉಣಬೇಕು"

32. "ಚಿಲಿಪಿಲಿಯ ಕಲರವಕೆ ಮತ್ತೇರಿದೆ."

33. "ಶಿವಶಿವ ಕಾದಿಗೆಲಿದೆವು."

CCERF

IX. ಕೆಳಗಿನ ಪದ್ಯಭಾಗವನ್ನು ಪೂರ್ಣಗೊಳಿಸಿ ಬರೆಯಿರಿ : **1 × 4 = 4**

34. ಏಕಾಂಗಿ ವೀರನಂತೆ .....

.....

.....

..... ಕತ್ತಲಲ್ಲಿ ನಡೆದನು.

ಅಥವಾ

ಕಾಡು ಕಾಡು .....

.....

.....

..... ಮಹಾಬೆಳಕೊಂದು ಕಂಡಿತು.

X. ಕೆಳಗಿನ ಪ್ರಶ್ನೆಗೆ ಎಂಟು ಅಥವಾ ಹತ್ತು ವಾಕ್ಯಗಳಲ್ಲಿ ಉತ್ತರ ಬರೆಯಿರಿ : **1 × 4 = 4**

35. ಎಂ. ಗೋಪಾಲಕೃಷ್ಣ ಅಡಿಗರ ಪ್ರಕಾರ ಜೀವನ ಯಾವಾಗ ಸಾರ್ಥಕವಾಗುತ್ತದೆ ಎಂಬುದನ್ನು ನೀವು ಮೆಚ್ಚುವ ಅಂಶಗಳೊಂದಿಗೆ ವಿವರಿಸಿ.

ಅಥವಾ

ಗುರಿ ಪದ್ಯದ ಸಾರಾಂಶವನ್ನು ನಿಮ್ಮ ಮಾತುಗಳಲ್ಲಿ ಬರೆಯಿರಿ.

XI. ಕೆಳಗಿನ ಗದ್ಯಭಾಗವನ್ನು ಮನಸ್ಸಿನಲ್ಲಿ ಓದಿಕೊಂಡು, ಕೊಟ್ಟಿರುವ ಪ್ರಶ್ನೆಗಳಿಗೆ ಉತ್ತರ ಬರೆಯಿರಿ : **1 × 4 = 4 (2 + 2)**

36. ಸ್ವತಂತ್ರ ಭಾರತದ ಮೊದಲ ಪ್ರಧಾನಿಗಳಾದ ಪಂಡಿತ್ ಜವಾಹರಲಾಲ್ ನೆಹರು ಅವರು ಬೆಂಗಳೂರಿನಲ್ಲಿ ವಿಶ್ವೇಶ್ವರಯ್ಯ ಅವರ ಜನ್ಮಶತಮಾನೋತ್ಸವ ಸಮಾರಂಭದಲ್ಲಿ ಅವರನ್ನು ಕುರಿತು "ದುರದೃಷ್ಟವಶಾತ್ ಭಾರತೀಯರಾದ ನಾವು ಹೆಚ್ಚು ಮಾತನಾಡುವವರು ಮತ್ತು ನುಡಿದಂತೆ ನಡೆಯಲಾರದವರೆಂಬ ದೂಷಣೆಗೆ ಒಳಗಾಗಿದ್ದೇವೆ. ತಾವು ಈ ಮಾತಿಗೆ ಬಹು ದೊಡ್ಡ ರೀತಿಯಲ್ಲಿ ಹೊರತಾಗಿದ್ದೀರಿ. ತಾವು ಕಡಿಮೆ ಮಾತನಾಡಿದ್ದೀರಿ ಹೆಚ್ಚು ಕೆಲಸ ಮಾಡಿದ್ದೀರಿ. ಅದನ್ನು ನಾವು ತಮ್ಮಿಂದ ಕಲಿಯೋಣ" ಎಂದು ಮಾರ್ಮಿಕವಾಗಿ ನುಡಿದರು. ಅವರ ಒಂದೊಂದು ಮಾತುಗಳು ಸರ್ ಎಂ. ವಿಶ್ವೇಶ್ವರಯ್ಯನವರಿಗೆ ಅಕ್ಷರಶಃ ಸಲ್ಲುತ್ತಿದ್ದವು. ಇವರು ಭಾರತದ ಆಧುನಿಕತೆಯ ಹರಿಕಾರರಾಗಿ ವಾಸ್ತವ ಚಿಂತನೆ, ನಿಸ್ವಾರ್ಥ ನಡತೆ, ಸುಸಂಗತ ವೈಜ್ಞಾನಿಕ ದೃಷ್ಟಿ, ಯೋಜನೆ ಮತ್ತು ದಕ್ಷ ಆಡಳಿತದ ತಳಹದಿಯ ಮೇಲೆ ಹೊಸ ರಾಷ್ಟ್ರ ನಿರ್ಮಿಸಲು ಮುಂದಾದವರು.

ಮೈಸೂರು ಸಂಸ್ಥಾನದ ಮಹಾರಾಜರಾಗಿದ್ದ ನಾಲ್ವಡಿ ಕೃಷ್ಣರಾಜ ಒಡೆಯರು ವಿಶ್ವೇಶ್ವರಯ್ಯ ಅವರನ್ನು ದಿವಾನರನ್ನಾಗಿ ನೇಮಿಸುವ ಮೂಲಕ ಹೊಸ ಮನ್ವಂತರಕ್ಕೆ ಅಡಿಪಾಯ ಹಾಕಿದರು. ವಿಶ್ವೇಶ್ವರಯ್ಯ ಅವರು ತಮ್ಮ ಆಡಳಿತ ಅವಧಿಯಲ್ಲಿ ಆಧುನಿಕ ಶಿಕ್ಷಣವನ್ನು ಸಾರ್ವತ್ರೀಕರಣಗೊಳಿಸಲು ಯೋಜನೆಗಳನ್ನು ರೂಪಿಸಿ ಕಾರ್ಯರೂಪಕ್ಕೆ ತಂದರು. ನಿರುದ್ಯೋಗವನ್ನು ಹೋಗಲಾಡಿಸಲು ಕೈಗಾರಿಕೆಗೆ ಅಗ್ರ ಪ್ರಾಶಸ್ತ್ಯ ನೀಡಿದರು.

ರಾಜ್ಯದ ಆರ್ಥಿಕ ಚಟುವಟಿಕೆಗಳಿಗೆ ಭದ್ರಬುನಾದಿಯನ್ನು ಹಾಕುವ ಉದ್ದೇಶದಿಂದ ಹಣಕಾಸು ನೀತಿಯಲ್ಲಿ ಮಾರ್ಪಾಡು ಮಾಡಿದರು. ಇದಕ್ಕಾಗಿ 1913 ರಲ್ಲಿ ಮೈಸೂರು ಬ್ಯಾಂಕನ್ನು ಸ್ಥಾಪಿಸಿದರು. ಅನಂತರ ಉಳಿತಾಯ ಬ್ಯಾಂಕುಗಳು ಅಸ್ತಿತ್ವಕ್ಕೆ ಬಂದವು. ಕೈಗಾರಿಕೆಗಳ ಅಭಿವೃದ್ಧಿಗೆ ಪೀಡರ್ ಬ್ಯಾಂಕ್ ಹಾಗೂ ಕೈಗಾರಿಕಾ ಹೂಡಿಕೆ ಮತ್ತು ಅಭಿವೃದ್ಧಿ ನಿಧಿಗಳು ರಚಿತಗೊಂಡವು. ಸಾರ್ವಜನಿಕ ಜೀವವಿಮಾ ಯೋಜನೆ ಜಾರಿಗೆ ತಂದರು. ಇದರಿಂದ ರಾಜ್ಯದ ಆದಾಯ ಹೆಚ್ಚಿ ಅಭಿವೃದ್ಧಿ ಕಂಡಿತು. ಇವರ ಸಾಧನೆಯನ್ನು ಗುರುತಿಸಿದ ಭಾರತ ಸರ್ಕಾರ ದೇಶದ ಅತ್ಯುನ್ನತ 'ಭಾರತ ರತ್ನ' ಪ್ರಶಸ್ತಿ ನೀಡಿ ಗೌರವಿಸಿತು.

ಪ್ರಶ್ನೆಗಳು :

ಅ) ಹಣಕಾಸು ನೀತಿಯಲ್ಲಿ ವಿಶ್ವೇಶ್ವರಯ್ಯ ಅವರು ಮಾಡಿದ ಮಾರ್ಪಾಡುಗಳು ಯಾವುವು ?

ಆ) ನೆಹರು ಅವರು ಸರ್ ಎಂ. ವಿಶ್ವೇಶ್ವರಯ್ಯ ಅವರ ಬಗ್ಗೆ ಏನೆಂದು ಹೇಳಿದ್ದಾರೆ ?

XII. ಕೆಳಗಿನ ಯಾವುದಾದರೂ ಒಂದು ವಿಷಯವನ್ನು ಕುರಿತು ಪ್ರಬಂಧ ಬರೆಯಿರಿ : 1 × 4 = 4

37. ಗ್ರಂಥಾಲಯದ ಮಹತ್ವ.

ಅಥವಾ

ಕೆರೆಗಳ ಸಂರಕ್ಷಣೆಯ ಅಗತ್ಯತೆ.

CCERF

XIII. ಕೆಳಗಿನ ಯಾವುದಾದರೂ ಒಂದಕ್ಕೆ ಕೊಟ್ಟಿರುವ ಮಾಹಿತಿಯನ್ನು ಆಧರಿಸಿ ಪತ್ರ ಬರೆಯಿರಿ : **1 × 5 = 5**

38. ನಿಮ್ಮನ್ನು ವಿಜಯನಗರ ಜಿಲ್ಲೆಯ ಮಾವಿನಹಳ್ಳಿ ನಿವಾಸಿ 'ಸಂತೋಷ / ಸಂಗೀತಾ' ಎಂದು ಭಾವಿಸಿಕೊಂಡು, ನಿಮ್ಮ ಊರಿನಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ತೆರೆಯಬೇಕೆಂದು ಕೋರಿ ಜಿಲ್ಲಾಧಿಕಾರಿಗಳಿಗೆ ಒಂದು ಮನವಿ ಪತ್ರವನ್ನು ಬರೆಯಿರಿ.

ಅಥವಾ

ನಿಮ್ಮನ್ನು ಧಾರವಾಡ ಸರ್ಕಾರಿ ಪ್ರೌಢಶಾಲೆಯ ವಿದ್ಯಾರ್ಥಿನಿ 'ಕಾವ್ಯಾ' ಎಂದು ಭಾವಿಸಿಕೊಂಡು, ನಿಮ್ಮ ಶಾಲೆಯಲ್ಲಿ ಆಚರಿಸಿದ 'ವಿಶ್ವ ಪರಿಸರ ದಿನಾಚರಣೆ' ಕಾರ್ಯಕ್ರಮದ ವಿವರವನ್ನು ತಿಳಿಸಿ, ಬೀದರಿನ ಬಸವಕಲ್ಯಾಣ ನಿವಾಸಿಯಾದ 'ವಚನಾ' ಎಂಬ ಗೆಳೆತಿಗೆ ಪತ್ರವನ್ನು ಬರೆಯಿರಿ.

ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ

ಮಲ್ಲೇಶ್ವರಂ, ಬೆಂಗಳೂರು–560003

KARNATAKA SCHOOL EXAMINATION AND ASSESSMENT BOARD

Malleswaram, Bengaluru-560003

ಎಸ್.ಎಸ್.ಎಲ್.ಸಿ. ಮಾದರಿ ಪ್ರಶ್ನೆಪತ್ರಿಕೆ 2022–23

ವಿಷಯ : ತೃತೀಯ ಭಾಷೆ – ಕನ್ನಡ

SUBJECT: Third Language - Kannada

ಸಮಯ: 3 ಗಂಟೆ

ವಿಷಯ ಸಂಕೇತ: **62K**

ಗರಿಷ್ಠ ಅಂಕಗಳು : **80**

CCE-RF

ಶಾಲಾ ಅಭ್ಯರ್ಥಿಗಳಿಗೆ

ಪರೀಕ್ಷಾರ್ಥಿಗಾಗಿ ಸಾಮಾನ್ಯ ಸೂಚನೆಗಳು :

1. ಈ ಪ್ರಶ್ನೆಪತ್ರಿಕೆಯು ವಸ್ತುನಿಷ್ಠ ಮತ್ತು ವಿಷಯನಿಷ್ಠ ಮಾದರಿಯ ಒಟ್ಟು 38 ಪ್ರಶ್ನೆಗಳನ್ನು ಹೊಂದಿದೆ.

2. ಈ ಪ್ರಶ್ನೆಪತ್ರಿಕೆಯನ್ನು ಹಿಮ್ಮುಖ ಜಾಕೆಟ್ ಮೂಲಕ ಮೊಹರು (ಸೀಲ್) ಮಾಡಲಾಗಿದೆ. ಪರೀಕ್ಷೆ ಪ್ರಾರಂಭವಾಗುವ ಸಮಯಕ್ಕೆ ನಿಮ್ಮ ಪ್ರಶ್ನೆಪತ್ರಿಕೆಯ ಬಲಬದಿ ಪಾರ್ಶ್ವವನ್ನು ಕತ್ತರಿಸಿ, ಪ್ರಶ್ನೆಪತ್ರಿಕೆಯಲ್ಲಿ ಎಲ್ಲಾ ಪುಟಗಳು ಇವೆಯೇ ಎಂದು ಪರೀಕ್ಷಿಸಿಕೊಳ್ಳಿ.

3. ವಸ್ತುನಿಷ್ಠ ಮತ್ತು ವಿಷಯನಿಷ್ಠ ಮಾದರಿಯ ಪ್ರಶ್ನೆಗಳಿಗೆ ಕೊಟ್ಟಿರುವ ಸೂಚನೆಗಳನ್ನು ಪಾಲಿಸಿ.

4. ಬಲ ಭಾಗದಲ್ಲಿ ಕೊಟ್ಟಿರುವ ಅಂಕಿಗಳು ಪ್ರಶ್ನೆಗಳಿಗಿರುವ ಪೂರ್ಣ ಅಂಕಗಳನ್ನು ತೋರಿಸುತ್ತವೆ.

5. ಪ್ರಶ್ನೆಪತ್ರಿಕೆಯನ್ನು ಓದಿಕೊಳ್ಳಲು 15 ನಿಮಿಷಗಳ ಕಾಲಾವಕಾಶವು ಸೇರಿದಂತೆ, ಉತ್ತರಿಸಲು ನಿಗದಿಪಡಿಸಲಾದ ಸಮಯವನ್ನು ಪ್ರಶ್ನೆಪತ್ರಿಕೆಯ ಮೇಲ್ಭಾಗದಲ್ಲಿ ನೀಡಲಾಗಿದೆ.

[Turn over

I. ಕೆಳಗಿನ ಪ್ರಶ್ನೆಗಳಿಗೆ ಅಥವಾ ಅಪೂರ್ಣ ಹೇಳಿಕೆಗಳಿಗೆ ನಾಲ್ಕು ಆಯ್ಕೆಗಳನ್ನು ನೀಡಲಾಗಿದೆ. ಅವುಗಳಲ್ಲಿ ಹೆಚ್ಚು ಸೂಕ್ತವಾದ ಉತ್ತರವನ್ನು ಆರಿಸಿ, ಅದರ ಕ್ರಮಾಕ್ಷರದೊಂದಿಗೆ ಬರೆಯಿರಿ : 8 × 1 = 8

1. ಇವುಗಳಲ್ಲಿ ಅನುಸ್ವಾರದಿಂದ ಕೂಡಿರುವ ಪದ

(ಎ) ಅಮ್ಮ

(ಬಿ) ಪುಸ್ತಕ

(ಸಿ) ಕಂಪು

(ಡಿ) ಸ್ವತಃ

2. 'ಗೊರೂರರ ಕಣ್ಣಿಗೆ ಒಬ್ಬ ಟ್ರಾಫಿಕ್ ಪೊಲೀಸಿನವ ಬಿದ್ದ' ಈ ವಾಕ್ಯದಲ್ಲಿರುವ ಅನ್ಯದೇಶ್ಯ ಪದ

(ಎ) ಟ್ರಾಫಿಕ್ ಪೊಲೀಸ್

(ಬಿ) ಕಣ್ಣಿಗೆ

(ಸಿ) ಗೊರೂರರ

(ಡಿ) ಬಿದ್ದ

3. 'ಮರವನ್ನು' ಪದವು ಈ ವಿಭಕ್ತಿಗೆ ಉದಾಹರಣೆಯಾಗಿದೆ

(ಎ) ಪ್ರಥಮಾ

(ಬಿ) ದ್ವಿತೀಯಾ

(ಸಿ) ತೃತೀಯಾ

(ಡಿ) ಚತುರ್ಥೀ

4. ಸವರ್ಣದೀರ್ಘ ಸಂಧಿಗೆ ಉದಾಹರಣೆಯಾದ ಪದ

(ಎ) ವಿದ್ಯಾಭ್ಯಾಸ

(ಬಿ) ಸದ್ಗುರು

(ಸಿ) ಮತ್ತೊಮ್ಮೆ

(ಡಿ) ಶಾಲೆಯನ್ನು

5. ಈ ಕೆಳಗಿನ ಪದಗಳಲ್ಲಿ ಅನ್ವರ್ಥಕನಾಮಕ್ಕೆ ಉದಾಹರಣೆ

(ಎ) ದೇಶ

(ಬಿ) ಕಾವೇರಿ

(ಸಿ) ಹುಡುಗ

(ಡಿ) ವೈದ್ಯ

6. 'ಮಾನ' ಈ ಪದದ ವಿರುದ್ಧಾರ್ಥಕ ರೂಪ

(ಎ) ಸನ್ಮಾನ

(ಬಿ) ಅವಮಾನ

(ಸಿ) ಹವಾಮಾನ

(ಡಿ) ಅನುಮಾನ

7. 'ಢಣಢಣ' ಪದವು ಈ ವ್ಯಾಕರಣಾಂಶಕ್ಕೆ ಸೇರಿದೆ

(ಎ) ದ್ವಿರುಕ್ತಿ

(ಬಿ) ಅನುಕರಣಾವ್ಯಯ

(ಸಿ) ನುಡಿಗಟ್ಟು

(ಡಿ) ಜೋಡುನುಡಿ

8. 'ಕಾವೇರಿಯ ಮುಖ ಕಮಲದಂತೆ ಅರಳಿತು' ಈ ವಾಕ್ಯದಲ್ಲಿರುವ ಅಲಂಕಾರ

(ಎ) ರೂಪಕಾಲಂಕಾರ

(ಬಿ) ಉತ್ಪ್ರೇಕ್ಷಾಲಂಕಾರ

(ಸಿ) ಉಪಮಾಲಂಕಾರ

(ಡಿ) ಶ್ಲೇಷಾಲಂಕಾರ

II. ಕೆಳಗಿನವುಗಳಲ್ಲಿ ಮೊದಲೆರಡು ಪದಗಳಿಗಿರುವ ಸಂಬಂಧದಂತೆ ಮೂರನೆಯ ಪದಕ್ಕೆ ಸರಿ ಹೊಂದುವ ಸಂಬಂಧೀ ಪದವನ್ನು ಬರೆಯಿರಿ : **4 × 1 = 4**

9. ಸತ್ಯವ ನುಡಿವುದೇ : ದೇವಲೋಕ :: ಮಿಥ್ಯವ ನುಡಿವುದೇ : ..... .

10. ಅಪ್ಪರಿಲ್ಲದೆ ಸೊಪ್ಪಾದುದು : ಭೂಮಿ :: ಸಪ್ಪೆ ದಂಟಾದುದು : ..... .

11. ಹುಲಗೂರಿನ ಸಂತ : ಖಾದರ್‌ಷಾ ವಲಿ :: ಶಿಶುನಾಳದ ಸಂತ : ..... .

12. ಸಂಧ್ಯಾರಾಗ : ಅ.ನ. ಕೃಷ್ಣರಾಯ :: ರೂಪದರ್ಶಿ : ..... .

III. ಕೆಳಗಿನ ಪ್ರತಿಯೊಂದು ಪ್ರಶ್ನೆಗಳಿಗೆ ಒಂದೊಂದು ವಾಕ್ಯದಲ್ಲಿ ಉತ್ತರ ಬರೆಯಿರಿ : 4 × 1 = 4

13. ಮೋಹನಪುರದ ಉತ್ಸಾಹೀ ತರುಣ ಯಾರು ?

14. ಡಾಂಭಿಕ ಭಕ್ತನ ಕರದಲ್ಲಿ ಏನಿದೆ ಎಂದು ಪುರಂದರದಾಸರು ಹೇಳಿದ್ದಾರೆ ?

15. ಈರಪ್ಪ ಎಂ. ಕಂಬಳಿಯವರ ಬಿಳಿಯ ಶರ್ಟು ಕೆಂಪು ಬಣ್ಣಕ್ಕೆ ತಿರುಗಿದ್ದೇಕೆ ?

16. ಪುಲಿಗೆರೆ ಸೋಮನಾಥ ಹೇಳಿರುವಂತೆ ಮಗನಾದವನಲ್ಲಿ ಇರಬೇಕಾದ ಗುಣ ಯಾವುದು ?

IV. ಕೆಳಗಿನ ಪ್ರಶ್ನೆಗಳಿಗೆ ಮೂರು ಅಥವಾ ನಾಲ್ಕು ವಾಕ್ಯಗಳಲ್ಲಿ ಉತ್ತರ ಬರೆಯಿರಿ : 8 × 2 = 16

17. ಗೊರೂರರು ಮಿನಿಪೊಲೀಸ್ ನಗರದಲ್ಲಿ ಕಾರು ಇಳಿದ ಸ್ಥಳದಿಂದ ಏಕೆ ತಪ್ಪಿಸಿಕೊಂಡರು ?

18. ಸತೀಶ ಕುಲಕರ್ಣಿಯವರು ಕಟ್ಟಬಯಸಿರುವ ನಾಡು ಹೇಗಿರುತ್ತದೆಂದು ಅಭಿವ್ಯಕ್ತಪಡಿಸಿ.

19. ಶರೀಫರ ಬಾಲ್ಯವು ಹಿಂದೂ ಪರಂಪರೆಯೊಂದಿಗೆ ಹೇಗೆ ಬೆರೆತುಹೋಗಿತ್ತು ?

20. ಶರೀಫರು ತಮ್ಮ ವೈಯಕ್ತಿಕ ಬದುಕಿನಲ್ಲಾದ ದುಃಖವನ್ನು ಹೇಗೆ ಕಡಿಮೆ ಮಾಡಿಕೊಂಡರೆಂಬುದನ್ನು ನಿಮ್ಮ ಮಾತುಗಳಲ್ಲಿ ಅಭಿವ್ಯಕ್ತಪಡಿಸಿ.

21. ಸಿ.ಪಿ.ಕೆ.ಯವರು ಗ್ರಂಥಗಳನ್ನು 'ಹಿರಿಬಾಳುಗಳ ಪಳೆಯುಳಿಕೆ' ಎಂದು ಕರೆಯಲು ಕಾರಣವೇನು ?

22. ಸ್ವಾತಿ ಮಳೆ ಸುರಿದಾಗ ರೈತನ ಸಂಭ್ರಮವನ್ನು ನಿಮ್ಮ ಮಾತುಗಳಲ್ಲಿ ಬರೆಯಿರಿ.

23. ಬೆಳವಡಿ ಮಲ್ಲಮ್ಮಾಜಿ ತನ್ನ ಸ್ತ್ರೀ ಸೈನ್ಯದೊಂದಿಗೆ ಶಿವಾಜಿಯ ಸೈನಿಕರ ಮೇಲೆ ದಾಳಿ ನಡೆಸಲು ಕಾರಣವೇನು ?

24. ಧರ್ಮಪದನನ್ನು ನೋಡಿ ವಿಶುವಿನಲ್ಲಿ ಮೂಡಿದ ಭಾವನೆಗಳೇನು ?

V. ಕೆಳಗಿನ ವಾಕ್ಯ ಅಥವಾ ಹೇಳಿಕೆಗಳಿಗೆ ಸಂದರ್ಭದೊಡನೆ ಸ್ವಾರಸ್ಯವನ್ನು ಬರೆಯಿರಿ : 2 × 3 = 6

25. "ಪೊಲೀಸ್‌ನವರ ಸಹವಾಸವಾದ ಮೇಲೆ ಲಾಕಪ್ ಆಗಲೇ ಬೇಕಷ್ಟೆ."

26. "ಕಣ್‌ದಿಟ್ಟಿ ಹರಿದತ್ತ ಗ್ರಂಥಗಿರಿ ಪಂಕ್ತಿಗಳು."

VI. ಕೆಳಗಿನ ಪ್ರಶ್ನೆಗಳಿಗೆ ಐದು ಅಥವಾ ಆರು ವಾಕ್ಯಗಳಲ್ಲಿ ಉತ್ತರ ಬರೆಯಿರಿ : 4 × 3 = 12

27. ತನ್ನ ಮಗ ದೇಶಕ್ಕಾಗಿ ಬಲಿಯಾದ ಸಂದರ್ಭದಲ್ಲಿಯೂ ರಾಮ್‌ಸಿಂಗ್‌ನ ತಾಯಿ ತೋರಿದ ದೇಶಪ್ರೇಮ ಹಾಗೂ ತ್ಯಾಗವನ್ನು ಕುರಿತು ಬರೆಯಿರಿ.

28. ಬೀಚಿ ಅವರು ಕನ್ನಡದ ದೀಕ್ಷೆ ಸ್ವೀಕರಿಸಿದ ಸಂದರ್ಭವನ್ನು ನಿಮ್ಮ ಮಾತುಗಳಲ್ಲಿ ಬರೆಯಿರಿ.

29. ಅಂತರಂಗ ಮತ್ತು ಬಹಿರಂಗವನ್ನು ಹೇಗೆ ಶುದ್ಧಿಯಾಗಿಡಬಹುದೆಂದು ಬಸವಣ್ಣನವರು ವರ್ಣಿಸಿದ್ದಾರೆ ?

30. ಪುರಂದರದಾಸರ ಕೀರ್ತನೆಯಲ್ಲಿ ಡಂಭಾಚಾರದ ಭಕ್ತಿಯ ಚಿತ್ರಣವು ಹೇಗೆ ಚಿತ್ರಿತವಾಗಿದೆ ಎಂಬುದನ್ನು ನಿಮ್ಮ ಮಾತುಗಳಲ್ಲಿ ಬರೆಯಿರಿ.

VII. ಕೆಳಗಿನ ಕವಿಗಳ / ಸಾಹಿತಿಗಳ ಜನ್ಮಸ್ಥಳ, ಕಾಲ ಮತ್ತು ಕೃತಿಗಳನ್ನು ಕುರಿತು ವಾಕ್ಯರೂಪದಲ್ಲಿ ಬರೆಯಿರಿ : **2 × 3 = 6**

31. ಸತೀಶ ಕುಲಕರ್ಣಿ

32. ವಿಜಯಲಕ್ಷ್ಮಿ ಈಶ್ವರಪ್ಪ ಬಾಳೇಕುಂದ್ರಿ

VIII. ಕೆಳಗೆ ಕೊಟ್ಟಿರುವ ಗಾದೆಮಾತುಗಳಲ್ಲಿ ಯಾವುದಾದರೂ ಒಂದನ್ನು ಆರಿಸಿಕೊಂಡು, ವಿಸ್ತರಿಸಿ ಬರೆಯಿರಿ : **1 × 3 = 3**

33. "ಕೈ ಕೆಸರಾದರೆ ಬಾಯಿ ಮೊಸರು."

ಅಥವಾ

"ಕುಂಬಾರನಿಗೆ ವರುಷ; ದೊಣ್ಣೆಗೆ ನಿಮಿಷ."

IX. ಕೆಳಗಿನ ಒಂದು ಪ್ರಶ್ನೆಗೆ ಎಂಟು ಅಥವಾ ಹತ್ತು ವಾಕ್ಯಗಳಲ್ಲಿ ಉತ್ತರ ಬರೆಯಿರಿ : 1 × 4 = 4

34. ಗಾಂಧೀಜಿಯವರು ಕೊಡಗಿನಲ್ಲಿ ತಂಗಿದ್ದಾಗ ನಡೆದ ಸಂಗತಿಗಳನ್ನು ನಿಮ್ಮ ಮಾತುಗಳಲ್ಲಿ ವಿವರಿಸಿ.

ಅಥವಾ

'ಕೊಡಗಿನ ಗೌರಮ್ಮನವರು ಆ ಕಾಲದ ಮಹಿಳಾ ಸದಭಿರುಚಿಯ ದ್ಯೋತಕವಾಗಿದ್ದರು' ಎಂಬ ಹೇಳಿಕೆಯನ್ನು ಸಮರ್ಥಿಸಿ.

X. ಕೆಳಗಿನ ಪದ್ಯಭಾಗವನ್ನು ಪೂರ್ಣಗೊಳಿಸಿ ಬರೆಯಿರಿ : 1 × 4 = 4

35. ನಾವು ನೀವು .....

.....

.....

..... ಇಂದೆ

ಅಥವಾ

ಕರ್ನಾಟಕ .....

.....

.....

..... ಒಂದೆ.

XI. ಕೆಳಗಿನ ಗದ್ಯಭಾಗವನ್ನು ಮನಸ್ಸಿನಲ್ಲಿ ಓದಿಕೊಂಡು, ಕೊಟ್ಟಿರುವ ಪ್ರಶ್ನೆಗಳಿಗೆ ಉತ್ತರ ಬರೆಯಿರಿ :

1 × 4 = 4

36. ಪಂಜಾಬ್ ಪ್ರಾಂತ್ಯದ 'ಬಂಗ' ಎಂಬ ಹಳ್ಳಿ ಭಗತ್‌ಸಿಂಗ್ ಹುಟ್ಟಿದ ಸ್ಥಳ. ಕ್ರಿ.ಶ. 1907 ಸೆಪ್ಟೆಂಬರ್ 23 ಈತನ ಜನ್ಮದಿನ. ತಂದೆ ಕಿಷನ್‌ಸಿಂಗ್, ತಾಯಿ ವಿದ್ಯಾವತಿ. ಕ್ರಾಂತಿಕಾರರ ಮನೆತನ.

ಅವನ ತಂದೆಯೂ, ಚಿಕ್ಕಪ್ಪಂದಿರೂ ಬ್ರಿಟಿಷರ ದಬ್ಬಾಳಿಕೆಯನ್ನು ಪ್ರತಿಭಟಿಸಿ ಅನೇಕ ಸಲ ಸೆರೆಮನೆವಾಸವನ್ನು ಅನುಭವಿಸಿದ್ದರು. ಚಿಕ್ಕಂದಿನಿಂದಲೂ ಬಾಲಕ ಭಗತ್‌ಸಿಂಗ್ ಬಹಳ ಚುರುಕು. ಭಾರತಕ್ಕೆ ಸ್ವಾತಂತ್ರ್ಯ ಬರಬೇಕಿದ್ದರೆ ಸಶಸ್ತ್ರ ಕ್ರಾಂತಿಯಿಂದ ಮಾತ್ರ ಸಾಧ್ಯ ಎಂಬ ಭಾವನೆಯನ್ನು ಹೊಂದಿದ್ದನು. ಭಗತ್‌ಸಿಂಗ್‌ನ ಬಾಲ್ಯದ ನಡೆನುಡಿ ಮುಂದೆ ಅವನು ಎಂತಹ ವೀರನಾಗಬಹುದು ಎಂಬುದನ್ನು ಸೂಚಿಸುತ್ತಿದ್ದವು.

ಪ್ರಶ್ನೆಗಳು

ಎ) ಭಗತ್‌ಸಿಂಗ್ ಹುಟ್ಟಿದ ಸ್ಥಳವನ್ನು ಹೆಸರಿಸಿ.

ಬಿ) ಭಗತ್‌ಸಿಂಗ್‌ನ ಮನೆತನ ಎಂತಹದಾಗಿತ್ತು ?

ಸಿ) ಭಗತ್‌ಸಿಂಗ್‌ನ ತಂದೆ ಹಾಗೂ ಚಿಕ್ಕಪ್ಪಂದಿರು ಏಕೆ ಸೆರೆಮನೆವಾಸವನ್ನು ಅನುಭವಿಸಿದ್ದರು ?

ಡಿ) ಭಗತ್‌ಸಿಂಗ್ ಭಾರತದ ಸ್ವಾತಂತ್ರ್ಯದ ಕುರಿತು ಯಾವ ಭಾವನೆಯನ್ನು ಹೊಂದಿದ್ದನು ?

XII. ಕೆಳಗಿನ ಯಾವುದಾದರೂ ಒಂದು ವಿಷಯವನ್ನು ಕುರಿತು ಹದಿನೈದು ವಾಕ್ಯಗಳಿಗೆ ಕಡಿಮೆಯಿಲ್ಲದಂತೆ ಪ್ರಬಂಧ ಬರೆಯಿರಿ : **1 × 4 = 4**

37. ರಾಷ್ಟ್ರೀಯ ಹಬ್ಬಗಳ ಆಚರಣೆಯ ಮಹತ್ವ.

ಅಥವಾ

ಶಾಲೆಗಳಲ್ಲಿ ಕ್ಷೀರಭಾಗ್ಯ

XIII. ಕೆಳಗಿನ ಯಾವುದಾದರೂ ಒಂದಕ್ಕೆ ಕೊಟ್ಟಿರುವ ಮಾಹಿತಿಯನ್ನು ಆಧರಿಸಿ ಪತ್ರ ಬರೆಯಿರಿ : **1 × 5 = 5**

38. ನಿಮ್ಮನ್ನು ಮೈಸೂರಿನ ಕುವೆಂಪು ನಗರದ ಸರ್ಕಾರಿ ಪ್ರೌಢಶಾಲೆಯ ವಿದ್ಯಾರ್ಥಿ 'ಚಂದನ್' ಎಂದು ಭಾವಿಸಿಕೊಂಡು, ನಿಮ್ಮ ಮುಂದಿನ ವಿದ್ಯಾಭ್ಯಾಸಕ್ಕಾಗಿ ವರ್ಗಾವಣೆ ಪತ್ರವನ್ನು ನೀಡಬೇಕೆಂದು ಕೋರುತ್ತ, ನಿಮ್ಮ ಶಾಲೆಯ ಮುಖ್ಯೋಪಾಧ್ಯಾಯರಿಗೆ ಒಂದು ಮನವಿ ಪತ್ರವನ್ನು ಬರೆಯಿರಿ.

ಅಥವಾ

ನಿಮ್ಮನ್ನು ಶಿವಮೊಗ್ಗದ ನವೋದಯ ಪ್ರೌಢಶಾಲೆಯ ವಿದ್ಯಾರ್ಥಿನಿ 'ಇಂಚರ' ಎಂದು ಭಾವಿಸಿಕೊಂಡು, ನಿಮ್ಮ ಶಾಲೆಯಲ್ಲಿ ಆಚರಿಸಿದ 'ಸ್ವಾತಂತ್ರ್ಯ ಅಮೃತ ಮಹೋತ್ಸವ'ದ ಬಗ್ಗೆ ವಿವರಿಸಿ, ಬೆಂಗಳೂರಿನಲ್ಲಿರುವ ನಿಮ್ಮ ತಾಯಿಯವರಿಗೆ ಒಂದು ಪತ್ರವನ್ನು ಬರೆಯಿರಿ.